ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ : 1207

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 20.12.2018.

ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಸರ್ಕಾರಿ/ಅನುದಾನಿತ ಶಾಲಾ ಕಾಲೇಜುಗಳಲ್ಲಿ ದಿನಾಂಕ:01.08.2008ರ ನಂತರ ನೇರ ನೇಮಕಗೊಂಡಿರುವ ಶಿಕ್ಷಕ/ಉಪನ್ಯಾಸಕರಿಗೆ ವಿಶೇಷ ಭತ್ಯೆಯನ್ನು (ಎಕ್ಸ್‌ಗ್ರೇಷಿಯಾ) ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ:
ಆ)	ಹಾಗಿದ್ದಲ್ಲಿ ಸದರಿಯವರಿಗೆ ಎಕ್ಸ್‌ಗ್ರೇಷಿಯಾ ನೀಡದಿರಲು ಕಾರಣಗಳೇನು; (ವಿವರ ನೀಡುವುದು)	5ನೇ ರಾಜ್ಯ ವೇತನ ಆಯೋಗದ ಮಧ್ಯಂತರ ವರದಿಯಲ್ಲಿ ಮಾಡಿರುವ ಶಿಫಾರಸ್ಸಿನನ್ವಯ ಸರ್ಕಾರವು ಆದೇಶ ಸಂಖ್ಯೆ:ಆಇ 08 ಎಸ್.ಆರ್.ಪಿ.06, ದಿನಾಂಕ:29.03.2006ರಲ್ಲಿ ಸರ್ಕಾರಿ/ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ದಿನಾಂಕ:01.04.2006 ರಿಂದ ಜಾರಿಗೆ ಬರುವಂತೆ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿರುತ್ತದೆ. ತದನಂತರ 5ನೇ ವೇತನ ಆಯೋಗದ ಅಂತಿಮ ವರದಿಯಲ್ಲಿನ ಶಿಫಾರಸ್ಸಿನಂತೆ ರೂ. 200/-ಗಳ ವಿಶೇಷ ಭತ್ಯೆಯನ್ನು ಮುಂದುವರೆಸುವ ಜೊತೆಗೆ ಪ್ರಾಥಮಿಕ ಶಾಲಾ ಶಿಕ್ಷಕರ ಪ್ರಾರಂಭಿಕ ಮೂಲವೇತನವನ್ನು ರೂ.6250/- ರಿಂದ ರೂ.6800/-ಗಳಿಗೆ ಹೆಚ್ಚಿಸಿ ಶಿಫಾರಸ್ಸು ಮಾಡಲಾಗಿರುತ್ತದೆ. ಸರ್ಕಾರದ ಆದೇಶದ ಸಂಖ್ಯೆ:.ಆ.ಇ.14 ಎಸ್‌ಆರ್‌ಪಿ.2006, ದಿನಾಂಕ:12.05.2006ರಲ್ಲಿ ರಾಜ್ಯದ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಶಿಕ್ಷಕರಿಗೆ ಮತ್ತು ಸರ್ಕಾರಿ/ಅನುದಾನಿತ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ ಮಾಸಿಕ ರೂ.200/-ಗಳ ವಿಶೇಷ ವೇತನ ಭತ್ಯೆಯನ್ನು ಮಂಜೂರು ಮಾಡಿದ್ದು, ತದನಂತರ ಈ ಮೊತ್ತವನ್ನು ಕ್ರಮವಾಗಿ ಪ್ರಾಥಮಿಕ ಶಾಲಾ ಶಿಕ್ಷಕರು, ಪ್ರೌಢಶಾಲಾ ಸಹಶಿಕ್ಷಕರು ಮತ್ತು ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ264 ಎಸ್‌ಎಲ್‌ಬಿ 2012 ದಿನಾಂಕ:09.05.2012ರಲ್ಲಿ ರೂ.300/-,

		400/- ಮತ್ತು 500/- ಗಳಿಗೆ ಪರಿಷ್ಕರಿಸಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 31 ಎಸ್‌ಆರ್‌ಪಿ 2007 ದಿನಾಂಕ:29.08.2008ರಲ್ಲಿ ದಿನಾಂಕ:01.08.2008ರಂದು ಅಥವಾ ನಂತರ ನೇಮಕಾತಿ ಹೊಂದಿದ ಪ್ರಾಥಮಿಕ ಶಾಲಾ ಶಿಕ್ಷಕರು, ಮಾಸಿಕ ವಿಶೇಷ ಭತ್ಯೆ ಪಡೆಯಲು ಅರ್ಹರಿರುವುದಿಲ್ಲ.
ಇ)	ಸದರಿಯವರಿಗೆ ಎಕ್ಸ್‌ಗ್ರೇಷಿಯಾ ನೀಡಲು ಸರ್ಕಾರ ಯಾವದಾದರೂ ಕ್ರಮ ಕೈಗೊಳ್ಳುವುದೇ;	ರಾಜ್ಯ 06ನೇ ವೇತನ ಆಯೋಗದ ಶಿಫಾರಸ್ಸಿನಂತೆ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 06 ಎಸ್‌ಆರ್‌ಪಿ 2018 ದಿನಾಕ:19.04.2018ರಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರು, ಪ್ರೌಢಶಾಲಾ ಶಿಕ್ಷಕರು ಮತ್ತು ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳು ಪಡೆಯುತ್ತಿದ್ದ ವಿಶೇಷ ವೇತನ ಭತ್ಯೆಗಳನ್ನು ಮೂಲ ವೇತನದೊಂದಿಗೆ ವಿಲೀನಗೊಳಿಸಿ ಪರಿಷ್ಕೃತ ವೇತನ ಶ್ರೇಣಿಯಲ್ಲಿ ವೇತನವನ್ನು ನಿಗಧಿಪಡಿಸಿದೆ ಮತ್ತು ವಿಶೇಷ ವೇತನ ಭತ್ಯೆಗೆ ಸಂಬಂಧಿಸಿದ ಎಲ್ಲಾ ಆದೇಶಗಳನ್ನು ದಿನಾಂಕ:01.04.2008ರಿಂದ ಜಾರಿಗೆ ಬರುವಂತೆ ರದ್ದುಪಡಿಸಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.
ಈ)	ಯಾವ ಕಾಲಮಿತಿಯಲ್ಲಿ ಎಕ್ಸ್‌ಗ್ರೇಷಿಯಾ ನೀಡಲಾಗುವದು?	ಉದ್ಭವಿಸುವುದಿಲ್ಲ.

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ.

ಸಂಖ್ಯೆ: ಇಡಿ 328 ಎಸ್‌ಎಲ್‌ಬಿ 2018)